**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:-** 2020-21ನೇ ಸಾಲಿನ ಶೈಕ್ಷಣಿಕ ವರ್ಷದ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಹಾಜರಾಗುವ ಶಾಲಾ ವಿದ್ಯಾರ್ಥಿಗಳಿಗೆ ಕನಿಷ್ಠ ಹಾಜರಾತಿಯಿಂದ ವಿನಾಯಿತಿ ನೀಡುವ ಬಗ್ಗೆ.

**ಓದಲಾಗಿದೆ:-** ನಿರ್ದೇಶಕರು (ಪರೀಕ್ಷೆಗಳು), ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರುರವರ ಏಕ ಕಡತ ಸಂಖ್ಯೆ:ಎ8/ಎಸ್.ಎಸ್.ಎಲ್.ಸಿ/. ಕ.ಹಾ/49/2020-21 ದಿನಾಂಕ:13/01/2021/ 25/01/2021

* * * * *

ಪ್ರಸ್ತಾವನೆ:-

ಮೇಲೆ ಓದಲಾದ ದಿನಾಂಕ:25/01/2021ರ ಪ್ರಸ್ತಾವನೆಯಲ್ಲಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರು, ನಿರ್ದೇಶಕರು (ಪರೀಕ್ಷೆಗಳು), ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು ಇವರ ಏಕ ಕಡತ ಸಂಖ್ಯೆ:ಎ8/ಎಸ್ಎಸ್ಎಲ್ಸಿ/ಕ.ಹಾ/49/2020-21ರಲ್ಲಿ ಮಂಡಳಿಯ ಕಾಯ್ದೆ-1966 ನಿಯಮ-37 ರನ್ವಯ, ಶಾಲಾ ವಿದ್ಯಾರ್ಥಿಗಳು ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಹಾಜರಾಗಲು ಶಾಲೆಯು ಕಾರ್ಯನಿರ್ವಹಿಸಲು ನಿಗಧಿಪಡಿಸಿರುವ ದಿನಗಳಿಗೆ ಅನುಸಾರ ಕನಿಷ್ಠ ಶೇ.75ರಷ್ಟು ಹಾಜರಾತಿ ಕಡ್ಡಾಯವಾಗಿರುತ್ತದೆ.

ಕೋವಿಡ್-19 ಹರಡುತ್ತಿರುವುದನ್ನು ತಡೆಗಟ್ಟುವ ಹಿನ್ನೆಲೆಯಲ್ಲಿ 2020-21ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಶಾಲೆಗಳು ದಿನಾಂಕ:01.01.2021ರಿಂದ ಪ್ರಾರಂಭವಾಗಿದ್ದರೂ ಸಹ ವಿದ್ಯಾರ್ಥಿಗಳು ಶಾಲೆಗೆ ಹಾಜರಾಗುವುದನ್ನು ಕಡ್ಡಾಯಗೊಳಿಸಿರುವುದಿಲ್ಲ.

ದಿನಾಂಕ:25.11.2020ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆ ಬರೆಯುವ ವಿದ್ಯಾರ್ಥಿಗಳಿಗೆ 75%ರಷ್ಟು ಹಾಜರಾತಿ ಕಡ್ಡಾಯವಾಗಿರಬೇಕೆಂಬ ಅಂಶದ ಬಗ್ಗೆ ಚರ್ಚಿಸಿ ಎಸ್.ಎಸ್.ಎಲ್.ಸಿ ಪರೀಕ್ಷೆ ಬರೆಯುವ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಿದ ನಂತರ ಕನಿಷ್ಠ ಹಾಜರಾತಿಗೆ ವಿನಾಯಿತಿ ನೀಡಿ ಹಾಜರಾತಿ ಇಲ್ಲದಿದ್ದರೂ ಸಹ ವಿದ್ಯಾರ್ಥಿಗಳನ್ನು ಪರೀಕ್ಷೆಗೆ ಹಾಜರುಪಡಿಸಿಕೊಳ್ಳುವುದು ಸೂಕ್ತವೆಂದು ತೀರ್ಮಾನಿಸಲಾಯಿತು.

ಅದರಂತೆ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಇಪಿ 24 ಎಸ್ಎಲ್ಬಿ 2021
ದಿನಾಂಕ:01/02/2021

ರಾಜ್ಯದಲ್ಲಿ 2020-21ನೇ ಸಾಲಿನ ಶೈಕ್ಷಣಿಕ ವರ್ಷದ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಹಾಜರಾಗುವ ಶಾಲಾ ವಿದ್ಯಾರ್ಥಿಗಳಿಗೆ ಕನಿಷ್ಠ ಹಾಜರಾತಿಯಿಂದ ವಿನಾಯಿತಿ ನೀಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

1/2/21

(ಬಿ.ಎನ್ ಭಾಗ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಶಿಕ್ಷಣ ಇಲಾಖೆ (ಪ್ರೌಢ ಶಿಕ್ಷಣ)

ಪ್ರತಿ:

1. ಪ್ರಧಾನ ಮಹಾ ಲೇಖಪಾಲರು - ಕರ್ನಾಟಕ (ಎ ಮತ್ತು ಇ), ಬೆಂಗಳೂರು.

Scanned with CamScanner

2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು
3. ನಿರ್ದೇಶಕರು (ಪ್ರೌಢ ಶಿಕ್ಷಣ), ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು
4. ನಿರ್ದೇಶಕರು (ಪರೀಕ್ಷೆಗಳು), ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು
5. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ.
6. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ (ಸಂಬಂಧಿಸಿದ ಉಪನಿರ್ದೇಶಕರ ಮುಖಾಂತರ)
7. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು

Scanned with CamScanner